ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 09–12–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಮಾಜಿ ಮುಖ್ಯಮಂತ್ರಿ ದಿ. ನಿಜಲಿಂಗಪ್ಪನವರ 113ನೇ ಜನ್ಮ ದಿನದ ಅಂಗವಾಗಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ:<br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ | 10–12–2015<br>ಗುರುವಾರ<br>ಬೆಳಿಗ್ಗೆ<br>11–00 ಗಂಟೆಗೆ | ವಿಧಾನಸೌಧದ ಪಶ್ಚಿಮ ದಿಕ್ಕಿನಲ್ಲಿರುವ ದಿ. ನಿಜಲಿಂಗಪ್ಪನವರ ಪತ್ರಿಮೆ ಬಳಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ. . |
| 2 | ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಕಾನೂನು ಅರಿವು ಕಾರ್ಯಕ್ರಮ<br><br>ಉದ್ಘಾಟನೆ:<br><br>ನ್ಯಾಯಮೂರ್ತಿ ಎನ್. ಕೆ. ಪಾಟೀಲ್, ನ್ಯಾಯಾಧೀಶರು, ಕರ್ನಾಟಕ ಉಚ್ಚ ನ್ಯಾಯಾಲಯ ಹಾಗು ಕಾರ್ಯನಿರ್ವಾಹಕ ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ<br><br>ಘನ ಉಪಸ್ಥಿತಿ:<br>ಶ್ರೀ ಕೆ. ಸೋಮಶೇಖರ್,<br>ಪ್ರಧಾನ ನಗರ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, | 10–12–2015<br>ಗುರುವಾರ<br>ಬೆಳಿಗ್ಗೆ<br>9–15 ಘಂಟೆಗೆ | ಬಿಷಪ್ ಕಾಟನ್ ಮಹಿಳಾ ಕ್ರಿಶ್ಚಿಯನ್ ಕಾನೂನು ವಿದ್ಯಾಲಯ, ಬೆಂಗಳೂರು |

| | | | |
|---|---|---|---|
| | ಬೆಂಗಳೂರು | | |

ನಿರ್ದೇಶಕರ ಪರವಾಗಿ

## ಮಾಧ್ಯಮ ಮುಖ್ಯಸ್ಥರ ಗಮನಕ್ಕೆ

ಡಿಸೆಂಬರ್ 27 ರಂದು ನಡೆಯಲಿರುವ ವಿಧಾನ ಪರಿಷತ್ ಚುನಾವಣೆ ಸಂದರ್ಭದಲ್ಲಿ ಮತಗಟ್ಟೆ ಹಾಗೂ ಮತ ಎಣಿಕೆ ಕೇಂದ್ರಗಳಿಗೆ ಪರವಾನಗಿ ಪತ್ರವನ್ನು ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯಿಂದ ವಿತರಿಸಲಾಗುವುದು. ಆದ್ದರಿಂದ ತಮ್ಮ ಸಂಸ್ಥೆಯಿಂದ ಚುನಾವಣಾ ವರದಿಗೆ ನಿಯೋಜಿಸುವ ಮಾಧ್ಯಮ ಪ್ರತಿನಿಧಿಗಳ ಹೆಸರು, ಪದನಾಮ ಮೊಬೈಲ್ ಸಂಖ್ಯೆ ಸೇರಿದಂತೆ ಅವರ ಪೂರ್ಣ ಮಾಹಿತಿ ಹಾಗೂ ಅವರ ಇತ್ತೀಚಿನ ಮೂರು ಭಾವಚಿತ್ರಗಳನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಗೆ 15-12-2015 ರೊಳಗೆ ಸಲ್ಲಿಸಬೇಕು. ತಡವಾಗಿ ಸಲ್ಲಿಸುವ ಮನವಿಯನ್ನು ಪರಿಗಣಿಸುವುದಿಲ್ಲ.

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ರಾಷ್ಟ್ರೀಯ ಲೋಕ ಅದಾಲತ್

**ಬೆಂಗಳೂರು, ಡಿಸೆಂಬರ್ 9 (ಕರ್ನಾಟಕ ವಾತೆ□)**

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಕರ್ನಾಟಕ ಉಚ್ಚ ನ್ಯಾಯಾಲಯ, ಕಾನೂನು ಸೇವಾ ಸಮಿತಿ, ಕರ್ನಾಟಕ ರಾಜ್ಯ ಬಾರ್ ಕೌನ್ಸಿಲ್ ಮತ್ತು ರಾಜ್ಯ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಡಿಸೆಂಬರ್ 12 ರಂದು ಬೆಳಿಗ್ಗೆ 10-00 ಗಂಟೆಗೆ ಕರ್ನಾಟಕ ಉಚ್ಚ ನ್ಯಾಯಾಲಯದ ಎರಡನೇ ಮಹಡಿಯಲ್ಲಿರುವ ಕಾನೂನು ಸೇವೆ ಪ್ರಾಧಿಕಾರದ ಸಭಾಂಗಣದಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಶ್ರೀ ವಿ. ಗೋಪಾಲ್ ಗೌಡ ಅವರು ರಾಷ್ಟ್ರೀಯ ಲೋಕ ಅದಾಲತ್ ಉದ್ಘಾಟಿಸುವರು. ಕರ್ನಾಟಕ ಉಚ್ಚ ನ್ಯಾಯಾಲಯದ ಹಂಗಾಮಿ ಮುಖ್ಯ ನ್ಯಾಯಾಧೀಶ ಹಾಗೂ ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರದ ಮುಖ್ಯ ಸಂಚಾಲಕರಾದ ನ್ಯಾಯಮೂರ್ತಿ ಸುಬ್ರೋ ಕಮಲ್ ಮುಖರ್ಜಿ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾದ ಕರ್ನಾಟಕ ಉಚ್ಛ ನ್ಯಾಯಾಲಯದ ನ್ಯಾಯಮೂರ್ತಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷ ನ್ಯಾಯಮೂರ್ತಿ ಎನ್. ಕೆ. ಪಾಟೀಲ್, ಕರ್ನಾಟಕ ರಾಜ್ಯ ಅಡ್ವೋಕೇಟ್ ಜನರಲ್ ಶ್ರೀ ಮಧುಸೂಧನ್ ಆರ್. ನಾಯಕ್, ಕರ್ನಾಟಕ ರಾಜ್ಯ ಬಾರ್ ಕೌನ್ಸಿಲ್ ಅಧ್ಯಕ್ಷ ಎ.ಆರ್. ಪಾಟೀಲ್ ಮತ್ತು ರಾಜ್ಯ ವಕೀಲರ ಸಂಘದ ಅಧ್ಯಕ್ಷ ಹೆಚ್.ಸಿ. ಶಿವರಾಂ ಅವರುಗಳು ಪಾಲ್ಗೊಳ್ಳುವರು.

ಪಲ್ಲವಿ:ಬಾಬು:ಜಿಪಿಆರ್

## ಸಾರ್ವಜನಿಕ ರಜಾ ದಿನ: ಬೆಳ್ಳಿ ಸಿನಿಮಾ-ಬೆಳ್ಳಿ ಮಾತು ಇಲ್ಲ

ಬೆಂಗಳೂರು, ಡಿಸೆಂಬರ್ 9 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರಗಳಂದು ಸಂಜೆ 4-00 ಗಂಟೆಗೆ ಏರ್ಪಡಿಸುತ್ತಿದ್ದ ಬೆಳ್ಳಿ ಸಿನಿಮಾ-ಬೆಳ್ಳಿ ಮಾತು ಕಾರ್ಯಕ್ರಮವು ಡಿಸೆಂಬರ್ 12 ರಂದು ಬರುವ ಎರಡನೇ ಶನಿವಾರದಂದು ಸಾರ್ವಜನಿಕ ರಜಾ ದಿನವಾಗಿರುವ ಹಿನ್ನೆಲೆಯಲ್ಲಿ ಪ್ರದರ್ಶನ ಇರುವುದಿಲ್ಲ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ತಿಳಿಸಿದ್ದಾರೆ.

ಬೆಳ್ಳಿ ಸಿನಿಮಾ- ಬೆಳ್ಳಿ ಮಾತು ಕಾರ್ಯಕ್ರಮಗಳು ಶನಿವಾರ ಸಾರ್ವಜನಿಕ ರಜಾದಿನವಾದರೆ ಆ ದಿನಗಳಂದು ಬೆಳ್ಳಿ ಸಿನಿಮಾ ಬೆಳ್ಳಿ ಮಾತು ಕಾರ್ಯಕ್ರಮಗಳು ಇರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಹೆಚ್‌ಬಿಡಿ/ ಬಾಬು/ಕೆಎಂ